ದೊಡ್ಡಬಳ್ಳಾಪುರಕ್ಕೆ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ

311 (2442) - ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದೊಡ್ಡಬಳ್ಳಾಪುರ ನಗರದ ಒಳಚರಂಡಿ ವ್ಯವಸ್ಥೆ ಹಾಗೂ ಜಕ್ಕಲ ಮಡಗು ಜಲಾಶಯದಿಂದ ಕುಡಿಯುವ ನೀರಿನ ವ್ಯವಸ್ಥೆಯ ಅನುಷ್ಠಾನ ಈಗ ಯಾವ ಹಂತದಲ್ಲಿದೆ.

ಆ) ಈ ಯೋಜನೆಗೆ ಎಷ್ಟು ಹಣ ನಿಗಧಿಪಡಿಸಲಾಗಿದೆ.

ಇ) ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ದೊಡ್ಡಬಳ್ಳಾಪುರ ನಗರಕ್ಕೆ ಹಾಗೂ ಮಾರ್ಗಮಧ್ಯದಲ್ಲಿ ಬರುವ 6 ಹಳ್ಳಿಗಳಿಗೆ ಜಕ್ಕಲಮಡಗು ಜಲಾಶಯದಿಂದ ಕುಡಿಯುವ ನೀರು ಸರಬರಾಜು ಯೋಜನೆಗೆ ರೂ. 2249.68 ಲಕ್ಷಗಳಿಗೆ ಸರ್ಕಾರದ ಅಧಿಸೂಚನೆ ಸಂಖ್ಯೆ ಸಅಇ 23 ಯುಡಬ್ಲ್ಯುಎಸ್ 2002, ದಿನಾಂಕ 4.6.2002 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಸದರಿಯೋಜನಗೆ ಟೆಂಡರ್ ಕರೆಯಲಾಗಿದ್ದು, ಗುತ್ತಿಗೆದಾರರನ್ನು ನೇಮಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ನೀರು ಸರಬರಾಜು ಯೋಜನೆ ಪೂರ್ಣಗೊಂಡ ನಂತರ ಒಳಚರಂಡಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು.

ಆ) ನೀರು ಸರಬರಾಜು ಯೋಜನೆಗೆ ಅಂದಾಜು ರೂ. 2249.68 ಲಕ್ಷಗಳು.

ಇ) ಆದಷ್ಟು ಶೀಘ್ರವಾಗಿ ಈ ಯೋಜನೆಯನ್ನು ಕೈಗೆತ್ತಿಕೊಳ್ಳಲು ಕ್ರಮ ಜರುಗಿಸಲಾಗುವುದು.

ಸೋಮವಾರಪೇಟೆ ಪಟ್ಟಣ ಪಂಚಾಯಿತಿಗೆ ಕುಡಿಯುವ ನೀರಿನ ವ್ಯವಸ್ಥೆ

313 (2375) - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ. (ಸೋಮವಾರಪೇಟೆ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೋಮವಾರ ಪೇಟೆ ಪಟ್ಟಣ ಪಂಚಾಯಿತಿಗೆ ಕುಡಿಯುವ ನೀರಿನ ಸರಬರಾಜು ಮಾಡಲು ಏನು ಕ್ರಮ ಕೈಗೊಳ್ಳಲಾಗಿದೆ?

ಆ) ಕಳೆದ ಒಂದು ವರ್ಷದಿಂದ ಸದರಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳದಿರಲು ಕಾರಣವೇನು?

ಇ) ಕಾಮಗಾರಿ ಈಗ ಯಾವ ಹಂತದಲ್ಲಿದೆ ವಿವರ ನೀಡುವುದು.

ಈ) ಅದನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹಾರಂಗಿ ಜಲಾಶಯ ಮೂಲದಿಂದ ಸೋಮವಾರ ಪೇಟೆ ಪಟ್ಟಣಕ್ಕೆ ಹಾಗೂ ಸುತ್ತ ಮುತ್ತಲಿನ 4 ಹಳ್ಳಿಗಳಿಗೆ ಸೇರಿ ನೀರು ಸರಬರಾಜು ಯೋಜನೆ ಕಾರ್ಯ ಸಾಧ್ಯತಾ ವರದಿಯನ್ನು ರೂ. 532.00 ಲಕ್ಷಗಳಿಗೆ ತಯಾರಿಸಿದೆ.

ಆ) ಈ ಯೋಜನೆಗೆ 532.00 ಲಕ್ಷ ರೂ.ಗಳ ಸಾಧ್ಯತಾ ವರದಿಯನ್ನು ತಯಾರಿಸಿದ್ದು, ಆ ಪೈಕಿ 354.66 ಲಕ್ಷ ರೂ.ಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಭರಿಸಬೇಕಾಗಿರುತ್ತದೆ. ಈ ಯೋಜನೆಗೆ ಸವಿವರ ಅಂದಾಜುಗಳ ತಯಾರಿಸಲು ಜಲ ಮಂಡಲಿಗೆ ಸೂಚಿಸಲಾಗಿದೆ. ಸವಿವರ ಅಂದಾಜು ಸರ್ಕಾರಕ್ಕೆ ಬಂದ ಕೂಡಲೇ ಆಡಳಿತಾತ್ಮಕ ಅನುಮೋದನೆ ನೀಡಲು ಜರುಗಿಸಲಾಗುವುದು.